**ದಿನಾಂಕಃ 12.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಪಾಟೀಸವಾಲುಃ ಅಪೀಲುದಾರರ ಪರ ವಕೀಲರಿಂದಃ**

ನಾನು SSLC ವರೆಗೆ ವ್ಯಾಸಂಗ ಮಾಡಿರುತ್ತೇನೆ. ಅಪೀಲುದಾರರು ಏನು ಕೇಸು ಹಾಕಿರುತ್ತಾರೆ ಎಂದು ನನಗೆ ಗೊತ್ತು. ಅವರು ಪಿತ್ರಾರ್ಜಿತ ಆಸ್ತಿಯಲ್ಲಿ ಹಿಸ್ಸೆ ಕೇಳಿರುತ್ತಾರೆ ಎಂದರೆ ಸರಿ. ಅದು ದೀಪಾ ಮತ್ತು ಪುಷ್ಪ ರವರ ಒಟ್ಟು ಕುಟುಂಬದ ಸ್ವತ್ತು ಎಂದರೆ ಸರಿ. ಅಪೀಲುದಾರರ ಆರೋಗ್ಯದ ಬಗ್ಗೆ ದಾಖಲಾತಿಯನ್ನು ಪರಿಶೀಲನೆ ಮಾಡಿರುತ್ತೇನೆಯೇ ಎಂದರೆ ಅವರು ನಮ್ಮ ಜೊತೆಯೇ ಚೆನ್ನಾಗಿರುತ್ತಾರೆ. ನ್ಯಾಯಾಲಯಕ್ಕೆ ಏನು ದಾಖಲಾತಿ ಸಲ್ಲಿಸಿರುತ್ತಾರೆ ಎಂದು ತಿಳಿದುಕೊಂಡಿರುತ್ತೇನೆ. ದಾಖಲಾತಿಗಳನ್ನು ನಾನು ನೋಡಿರುವುದಿಲ್ಲ ಆದರೆ ತಿಳಿದುಕೊಂಡಿರುತ್ತೇನೆ. ಅವರ ಅನಾರೋಗ್ಯದ ಬಗ್ಗೆ ದಾಖಲಾತಿಯನ್ನು ಕೊಟ್ಟಿರುತ್ತಾರೆ ಎಂದರೆ ಅದು ಸುಳ್ಳು ದಾಖಲಾತಿ ಆಗಿರುತ್ತದೆ. ಅವರು ಕೇಸು ನಡೆಸಿದ್ದಲ್ಲಿ ನನಗೆ ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ. ಒಟ್ಟು ಕುಟುಂಬದ ಆಸ್ತಿ ಅಗಿದ್ದು ಹೇಗಾದರು ಮಾಡಿ ಲಪಾಟಿಸಬೇಕೆಂದು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತನ್ನು 2–3 ಜನಕ್ಕೆ ಮಾರಾಟ ಮಾಡಿರುತ್ತೇನೆ ಎಂದರೆ ಸರಿ. ಅವರ ಬೇರೆಯವರಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಗೊತ್ತಿಲ್ಲ. ಇದು ನನಗೆ ತೊಂದರೆ ಆಗುತ್ತದೆ ಎಂದು ಕ್ರಯಪತ್ರ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಈಗ 5–6 ಜನರಿಗೆ ಕ್ರಯಪತ್ರ ಆಗಿರುತ್ತದೆ ಎಂದರೆ ಸರಿಯಲ್ಲ. ದೀಪಾ ಮತ್ತು ಪುಷ್ಪರವರು 18 ವರ್ಷ ತುಂಬಿದ ನಂತರ ಭಾಗ ಕೇಳಿ ಕೇಸನ್ನು ಹಾಕಿರುತ್ತಾರೆ ಎಂದರೆ ಸರಿ. ನಾನು ಕ್ರಯಕ್ಕೆ ಕೊಟ್ಟಂತಹ ಸ್ವತ್ತು ಅವರ ಹಿಸ್ಸೆಗೆ ಬದ್ಧಪಡಿಸುವುದಿಲ್ಲ ಎಂದರೆ ಸರಿಯಲ್ಲ. ಹೇಗಾದರು ಮಾಡಿ ಆಸ್ತಿಯನ್ನು ಲಪಟಾಯಿಸಬೇಕೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಹೆಚ್ಚಿನ ಪಾಟೀ ಸವಾಲಿಗೆ ಕಾಲಾವಾಕಾಶ ಕೋರಿದ್ದು, ಕಾಲಾವಾಕಾಶ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದಂತೆ ಗಣಕೀಕರಣಗೊಳಿಸಿ ಮುದ್ರಿಸಲಾಯಿತು.)

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ

RA 105/2019

ನ್ಯಾಯಾಧೀಶರು, ಚನ್ನರಾಯಪಟ್ಟಣ